Akashvani : Bangalore
Regional Bulletin In Kannada
17.06.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
17.06.2024 / 14.30 hrs
<><*<><>*><>

## ಮುಖ್ಯಾಂಶಗಳು

೧. ಬಿಜೆಪಿ ಆಡಳಿತವಿರುವ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲೇ ತೈಲ ದರ ಕಡಿಮೆ-ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ

೨. ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ

೩. ಗ್ಯಾರಂಟಿ ಹೆಸರಿನಲ್ಲಿ ರಾಜ್ಯದ ಅಭಿವೃದ್ಧಿ ಶೂನ್ಯ- ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

೪. ಪೋಕ್ಸೋ ಪ್ರಕರಣ; ಸಿಐಡಿ ವಿಚಾರಣೆಗೆ ಹಾಜರಾದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ

೫. ದೇಶಾದ್ಯಂತ ಬಕ್ರೀದ್ ಹಬ್ಬದ ಸಡಗರ; ಮುಸ್ಲಿಂ ಬಾಂಧವರಿಗೆ ಗಣ್ಯರಿಂದ ಶುಭಾಶ

<><*<><>*><>

ರಾಜ್ಯದಲ್ಲಿ ಪೆಟ್ರೋಲ್ ಡಿಸೇಲ್ ದರ ಏರಿಕೆಯನ್ನ ಮುಖ್ಯಮಂತ್ರಿ ಸಿದ್ಧರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಿನ ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಗೆ ಹಣ ನೀಡಲು ತೈಲ ಬೆಲೆ ಏರಿಕೆ ಮಾಡಿಲ್ಲ. ಆರ್ಥಿಕ ಮೂಲಗಳಾದ ಮದ್ಯ ಮತ್ತು ತೈಲದಿಂದ ಹೆಚ್ಚಿನ ಆದಾಯ ಬಂದರೆ, ರಾಜ್ಯದ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು. ಜಾಗತಿಕವಾಗಿ ತೈಲ ಬೆಲೆ ಕಡಿಮೆ ಇದ್ದು, ಕೇಂದ್ರ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ಪ್ರತಿಭಟನೆ ನಡೆಸಲಿ ಎಂದು ತಿಳಿಸಿದರು. ಬಿಜೆಪಿ ಆಡಳಿತವಿರುವ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲೇ ತೈಲ ಬೆಲೆ ಕಡಿಮೆ ಇದೆ ಎಂದರು. ಇದೇ ವೇಳೆ ರಾಜ್ಯದಲ್ಲಿ ಸದ್ಯಕ್ಕೆ ಬಸ್ ಟಿಕೆಟ್ ದರ ಹೆಚ್ಚಳ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

<><*<><>*><>

ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ನಿರ್ಧಾರ ಖಂಡಿಸಿ, ಇಂದು ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ನಡೆಸಿದೆ. ಬೆಂಗಳೂರಿನ ಫ್ರೀಡಂಪಾರ್ಕ್ ನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್ ನೇತೃತ್ವದಲ್ಲಿ ಬಿಜೆಪಿ ನಾಯಕರು, ಪ್ರತಿಭಟನೆ ನಡೆಸಿದರು. ಶಾಸಕರಾದ ಭೈರತಿ ಬಸವರಾಜ್, ಪರಿಷತ್ ಸದಸ್ಯರಾದ ಸಿ.ಟಿ.ರವಿ ಹಾಗೂ ರವಿ ಕುಮಾರ್ ಭಾಗಿಯಾಗಿದ್ದರು. ಪ್ರತಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ಬೆಲೆ ಏರಿಕೆ ಹಿಂಪಡೆಯುವವರೆಗೂ ಬಿಜೆಪಿ, ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಕೆ ನೀಡಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಸರ್ಕಾರದ ಜನ

ವಿರೋಧಿ ನೀತಿಯಾಗಿದ್ದು, ಬಡವರು ಹಾಗೂ ಮಧ್ಯಮ ವರ್ಗದ ಜನರು ಸಂಕಷ್ಟ ಅನುಭವಿಸಲಿದ್ದಾರೆ ಎಂದು ಸರ್ಕಾರವನ್ನು ಟೀಕಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಜನಸಾಮಾನ್ಯರ ಬದುಕಿಗೆ ಗ್ಯಾರಂಟಿ ಇಲ್ಲದಂತಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಆರೋಪಿಸಿದ್ದಾರೆ. ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಖಂಡಿಸಿ ರಾಜ್ಯ ಸರಕಾರದ ವಿರುದ್ಧ ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ವತಿಯಿಂದ ಮಂಗಳೂರಿನಲ್ಲಿ ನಡೆದ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ತೈಲ ದರ ಇಳಿಕೆ ಮಾಡುವವರೆಗೆ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ಹೇಳಿದರು. ರಾಜ್ಯ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಳ ಮಾಡಿರುವುದನ್ನು ಖಂಡಿಸಿ ರಾಮನಗರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಹೆಚ್ಚಳ ಮಾಡಿರುವುದರಿಂದ ಮುಂದಿನ ದಿನಗಳಲ್ಲಿ ದಿನಬಳಕೆಯ ವಸ್ತುಗಳ ಬೆಲೆ ಹೆಚ್ಚಾಗಲಿದ್ದು, ಇದರಿಂದ ಬಡವರು ಮತ್ತು ಮಧ್ಯಮ ವರ್ಗದ ಜನ ಕಷ್ಟದ ಪರಿಸ್ಥಿತಿ ಎದುರಿಸುವಂತೆ ಆಗುತ್ತದೆ ಎಂದು ಕಾರ್ಯಕರ್ತರು ಅಸಮಾಧಾನ ವ್ಯಕ್ತಪಡಿಸಿದರು. ಪೆಟ್ರೋಲ್ ಡಿಸೇಲ್ ಬೆಲೆ ಏರಿಕೆ ಖಂಡಿಸಿ ಧಾರವಾಡದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ, ರಾಜ್ಯ ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಸಾರ್ವಜನಿಕರನ್ನು ಮತ್ತಷ್ಟು ಸಂಕಷ್ಟಕ್ಕೆ ದೂಡುವ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿದೆ ಎಂದು ದೂರಿದರು. ಇಂಧನ ದರ, ಮತ್ತು ಅಗತ್ಯ ವಸ್ತುಗಳ ಬೆಲೆ ಹೆಚ್ಚಳ ವಿರೋಧಿಸಿ ದಾವಣಗೆರೆಯಲ್ಲಿಂದು ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ನಗರದ ಜಯದೇವ ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

<><*<><>*><>

ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಕೊಡುವ ನೆಪದಲ್ಲಿ ರಾಜ್ಯದ ಬಡವರ ಮೇಲೆ ತೆರಿಗೆ ಹಾಕಿ, ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡುವ ಮೂಲಕ ರಾಜ್ಯದ ಜನತೆಗೆ ದ್ರೋಹ ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ದೂರಿದ್ದಾರೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಗ್ಯಾರಂಟಿಗಳ ಹೆಸರಿನಲ್ಲಿ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯದೇ ರಾಜ್ಯದ ಪ್ರಗತಿ ಶೂನ್ಯವಾಗಿದೆ. ರಾಜ್ಯ ಆರ್ಥಿಕವಾಗಿ ದಿವಾಳಿಯಾಗಿದ್ದು ಇದನ್ನು ಸರಿಪಡಿಸಲು ಹಲವಾರು ವರ್ಷ ಬೇಕು. ಇದಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆಯಾಗಿದೆ ಎಂದು ಆರೋಪಿಸಿದ್ದಾರೆ.

<><*<><>*><>

ಬೇರೆ ರಾಜ್ಯಗಳಿಗೆ ಹೋಲಿಸಿದರೆ ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್ ದರ ಕಡಿಮೆಯಿದ್ದು, ಸಾರ್ವಜನಿಕರಿಗೆ ಹೊರೆ ಆಗುವುದಿಲ್ಲ ಎಂದು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಆರ್.ಬಿ.ತಿಮ್ಮಾಪುರ ಸಮರ್ಥಿಸಿಕೊಂಡಿದ್ದಾರೆ. ಜಮಖಂಡಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ಉಚಿತ ಯೋಜನೆಗಳಿಗೆ ಹಾಗೂ ಪೆಟ್ರೋಲ್ ದರ ಹೆಚ್ಚಳಕ್ಕೆ ಯಾವುದೇ ಸಂಬಂಧವಿಲ್ಲ ಎಂದು ತಿಳಿಸಿದರು. ನಟ ದರ್ಶನ್ ಪ್ರಕರಣದಲ್ಲಿ ಸಚಿವರೊಬ್ಬರು ಪ್ರಭಾವ ಬೀರುತ್ತಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಅದು ಕೇವಲ ಊಹಾಪೋಹ, ಸರ್ಕಾರವಾಗಲಿ, ಸಚಿವರಾಗಲಿ ದರ್ಶನ್ ಪ್ರಕರಣದಲ್ಲಿ ಹಸ್ತಕ್ಷೇಪ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ಕುಪ್ಪಾಳು ಮೊರಾರ್ಜಿ ದೇಸಾಯಿ ವಸತಿ ಶಾಲಾ ಆವರಣದಲ್ಲಿ ವಿದ್ಯಾರ್ಥಿಯೋರ್ವ ವಿದ್ಯುತ್ ಸ್ಪರ್ಷದಿಂದ ಮೃತಪಟ್ಟಿದ್ದು, ಪ್ರಕರಣಕ್ಕೆ ಸಂಬಂದಪಟ್ಟಂತೆ ೮ ಮಂದಿ ಶಾಲಾ ಸಿಬ್ಬಂದಿಯನ್ನು ಶಿಕ್ಷಣ ಇಲಾಖೆ ಅಮಾನತುಗೊಳಿಸಿದೆ. ನಿರ್ಲಕ್ಷ್ಯದ ಆರೋಪದಡಿ ಶಾಲೆಯ ಪ್ರಾಂಶುಪಾಲರು. ಶಿಕ್ಷಕರು, ನಿಲಯ ಪಾಲಕರು ಸೇರಿ ಒಟ್ಟು ೮ ಜನರನ್ನು ಅಮಾನತುಗೊಳಿಸಲಾಗಿದೆ. ಶಾಲೆಯ ಆವರಣದಲ್ಲಿ ಇದ್ದ ಮರಕ್ಕೆ ವಿದ್ಯುತ್ ತಂತಿ ತಾಗಿದ್ದು, ಈ ತಂತಿಯನ್ನು ಸ್ಪರ್ಶಿಸಿ ೭ನೇ ತರಗತಿ ವಿದ್ಯಾರ್ಥಿ ಅಕಾಶ್ ಮೃತಪಟ್ಟಿದ್ದ.

<><*<><>*><>

ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು, ಇಂದು ಸಿಐಡಿ ವಿಚಾರಣೆಗೆ ಹಾಜರಾಗಿದ್ದಾರೆ. ಹೈಕೋರ್ಟ್ ನಿರ್ದೇಶನದಂತೆ ಸಿಐಡಿ, ಎಡಿಜಿಪಿ, ಬಿ.ಕೆ.ಸಿಂಗ್ ನೇತೃತ್ವದಲ್ಲಿ ತನಿಖಾಧಿಕಾರಿ ಪೃಥ್ವಿ.ಎಸ್.ಪಿ, ಸಾರಾಪಾತೀಮಾ, ಬಿ.ಎಸ್.ಯಡಿಯೂರಪ್ಪ ಅವರ ವಿಚಾರಣೆ ನಡೆಸುತ್ತಿದ್ದಾರೆ. ಮಾರ್ಚ್೧೪ ರಂದು ಯಡಿಯೂರಪ್ಪ ಅವರ ವಿರುದ್ಧ ಪೋಕ್ಸೊ ಪ್ರಕರಣ ದಾಖಲಾಗಿತ್ತು.

<><*<><>*><>

ಹಾವೇರಿ ಜಿಲ್ಲೆ ಬ್ಯಾಡಗಿ ಠಾಣೆಯಲ್ಲಿ ಹೆಣ್ಣು ಮಗುವನ್ನು ಅಕ್ರಮವಾಗಿ ಬೇರೆಯವರಿಗೆ ಹಸ್ತಾಂತರ ಮಾಡಿದ್ದ ಆರೋಪದಡಿ ನಾಲ್ವರ ವಿರುದ್ಧ ಎಫ್ಐಆರ್ ದಾಖಲಾಗಿದೆ. ಕೃತ್ಯಕ್ಕೆ ಸಂಬಂಧಪಟ್ಟಂತೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ್ ಮಾಹಿತಿ ನೀಡಿದ್ದಾರೆ. ಸಾಕ್ಷ್ಯಗಳನ್ನು ಪರಿಶೀಲಿಸಿ ಮುಂದಿನ ಕ್ರಮ ಜರುಗಿಸಲಾಗುವುದು ಎಂದು ಅವರು ತಿಳಿಸಿದ್ದಾರೆ

<><*<><>*><>

ದೇಶಾದ್ಯಂತ ಇಂದು ಬಕ್ರೀದ್ ಹಬ್ಬವನ್ನ ಸಡಗರ-ಸಂಭ್ರಮದಿಂದ ಆಚರಿಸಲಾಗುತ್ತಿದೆ. ಈದ್ಗಾ ಮೈದಾನಗಳಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸುತ್ತಿದ್ದಾರೆ. ತ್ಯಾಗ - ಬಲಿದಾನದ ಸಂದೇಶ ಸಾರುವ ಪವಿತ್ರ ಬಕ್ರೀದ್ ಹಬ್ಬವು ನಾಡಿನಲ್ಲಿ ಶಾಂತಿ, ಸೌಹಾರ್ದತೆಯು ನೆಲೆಸಲು ಪ್ರೇರಣೆಯಾಗಲಿ ಎಂದು ಆಶಿಸುತ್ತೇನೆ. ಸಮಸ್ತ ಮುಸ್ಲಿಂ ಬಂಧುಗಳಿಗೆ ಬಕ್ರೀದ್‌ನ ಶುಭಾಶಯಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲ ತಾಣದಲ್ಲಿ ತಿಳಿಸಿದ್ದಾರೆ. ಮಾಜಿ ಪ್ರಧಾನಿ ದೇವೇಗೌಡ, ಸಾಮಾಜಿಕ ಜಾಲತಾಣದಲ್ಲಿ ಮುಸ್ಲೀಂ ಬಾಂಧವರಿಗೆ ಬಕ್ರೀದ್ ಹಬ್ಬದ ಶುಭಾಶಯ ತಿಳಿಸಿದ್ದಾರೆ. ನಾಡಿನ ಸಮಸ್ತ ಮುಸ್ಲಿಂ ಬಾಂಧವರಿಗೆ ಬಕ್ರೀದ್ ಹಬ್ಬದ ಹಾರ್ದಿಕ ಶುಭಾಶಯಗಳು. ತ್ಯಾಗ, ಬಲಿದಾನದ ಪ್ರತೀಕವಾದ ಈ ಹಬ್ಬವು ಎಲ್ಲರ ಬದುಕಿನಲ್ಲಿ ಸುಖ, ಶಾಂತಿ, ನೆಮ್ಮದಿ ತರಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಸಾಮಾಜಿಕ ಜಾಲ ತಾಣದಲ್ಲಿ ಶುಭಾಶಯ ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನ ಚಾಮರಾಜಪೇಟೆಯ ಈದ್ಗಾ ಮೈದಾನದಲ್ಲಿ ಮುಸ್ಲಿಮರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಸಾಮೂಹಿಕ ಪ್ರಾರ್ಥನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸಚಿವ ಜಮೀರ್ ಅಹ್ಮದ್ ಪಾಲ್ಗೊಂಡು ಪಾರ್ಥನೆ ಸಲ್ಲಿಸಿದರು. ಸಾಮೂಹಿಕ ಪ್ರಾರ್ಥನೆ ಹಿನ್ನೆಲೆಯಲ್ಲಿ ಚಾಮರಾಜಪೇಟೆ ರಸ್ತೆ ಸಂಪರ್ಕಿಸುವ ಕೆ.ಆರ್ ಮಾರುಕಟ್ಟೆ ರಸ್ತೆ, ಚಾಮರಾಜಪೇಟೆ, ಬಸವನಗುಡಿ ರಸ್ತೆಗಳನ್ನು ಬಂದ್ ಮಾಡಲಾಗಿತ್ತು. ತ್ಯಾಗ ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ಹಾಗೂ

ನೆಲಮಂಗಲಗಳಲ್ಲಿ ಮುಸ್ಲಿಂ ಬಾಂಧವರು ಸಡಗರ ಸಂಭ್ರಮದಿಂದ ಆಚರಿಸಿದರು. ಕೋಲಾರ ಜಿಲ್ಲೆಯ ಈದ್ಗಾ ಮೈದಾನಗಳಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ಪರಸ್ಪರ ಬಕ್ರೀದ್ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ತ್ಯಾಗ ಬಲಿದಾನದ ಪ್ರತೀಕವಾದ ಬಕ್ರೀದ್ ಹಬ್ಬವನ್ನು ಯಾದಗಿರಿ ಜಿಲ್ಲೆಯಲ್ಲಿ ಮುಸ್ಲಿಂ ಬಾಂಧವರು ಸಂಭ್ರಮದಿಂದ ಆಚರಿಸಿದರು. ದಾವಣಗೆರೆಯಲ್ಲಿ ಬಕ್ರೀದ್ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಹಬ್ಬದ ಹಿನ್ನೆಲೆಯಲ್ಲಿ ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಚಿತ್ರದುರ್ಗ ಜಿಲ್ಲೆಯಲ್ಲಿ ಬಕ್ರೀದ್ ಹಬ್ಬವನ್ನು ಸಡಗರದಿಂದ ಮುಸ್ಲಿಂ ಸಮುದಾಯದವರು ಆಚರಿಸಿದರು. ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಗಣಿನಾಡು ಬಳ್ಳಾರಿ ಜಿಲ್ಲೆಯಲ್ಲಿ ಮುಸ್ಲಿಂ ಸಮುದಾಯದ ಜನತೆ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ಗದಗ ನಗರದ ಡಂಬಳ ಈದ್ಗಾ ಮೈದಾನದಲ್ಲಿ ಜರುಗಿದ ಸಾಮೂಹಿಕ ಪ್ರಾರ್ಥನೆಯಲ್ಲಿ ಸಹಸ್ರಾರು ಮುಸ್ಲಿಂ ಬಾಂಧವರು ಪಾಲ್ಗೊಂಡಿದ್ದರು.

<><*<><>*><>

ಮಾಜಿ ವಿಧಾನ ಪರಿಷತ್ ಸದಸ್ಯ, ಬಿಜೆಪಿ ಹಿರಿಯ ನಾಯಕ ಎಂ.ಬಿ.ಭಾನುಪ್ರಕಾಶ್ ನಿಧನ ಹೊಂದಿದ್ದಾರೆ. ಅವರಿಗೆ ೬೯ ವರ್ಷ ವಯಸ್ಸಾಗಿತ್ತು. ಶಿವಮೊಗ್ಗದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ, ಭಾನುಪ್ರಕಾಶ್ ಪ್ರತಿಭಟನೆ ನಡೆಸಿದ್ದರು. ಪ್ರತಿಭಟನೆ ಬಳಿಕ ಅವರಿಗೆ ಹೃದಯಾಘಾತವಾಗಿದೆ. ಕೂಡಲೇ ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ.

<><*<><>*><>

ಉತ್ತರ ಕನ್ನಡ ಜಿಲ್ಲೆಯಲ್ಲಿ ಯೋಗ ಮತ್ತು ಆಯುರ್ವೇದ ಪದ್ಧತಿಯನ್ನು ಉತ್ತಮ ರೀತಿಯಲ್ಲಿ ಬೆಳೆಸಲು ವಿಪುಲ ಅವಕಾಶಗಳಿದ್ದು ಇದರ ಸಂಪೂರ್ಣ ಸದ್ಬಳಕೆ ಆಗಬೇಕು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಹೇಳಿದರು. ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ, ವಿಶ್ವ ಯೋಗ ದಿನಾಚರಣೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಗದ ಮಹತ್ವದ ಬಗ್ಗೆ ಅರಿವು ಮೂಡಿಸುವಂತೆ ಆಯುಷ್ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಜೂನ್ ೨೧ ರಂದು ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಕಾರವಾರದ ಕಾಜುಭಾಗದ ಪೊಲೀಸ್ ಕಲ್ಯಾಣ ಮಂಟಪದಲ್ಲಿ ಆಯೋಜಿಸಲು ಎಲ್ಲಾ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ನಿರ್ದೇಶಿಸಿದರು.

<><*<><>*><>

ಇನ್ನು ಹವಾವರ್ತಮಾನ...

ನೈಋತ್ಯ ಮುಂಗಾರು ಕರಾವಳಿ ಹಾಗೂ ಉತ್ತರ ಒಳನಾಡಿನಲ್ಲಿ ಸಾಧಾರಣವಾಗಿತ್ತು. ದಕ್ಷಿಣ ಒಳನಾಡಿನಲ್ಲಿ ದುರ್ಬಲವಾಗಿದ್ದು, ಕರಾವಳಿಯ ಹಲವು ಕಡೆಗಳಲ್ಲಿ ಮಳೆಯಾಗಿದೆ. ಕುಮಟಾದಲ್ಲಿ ೯ ಸೆಂಟಿಮೀಟರ್, ಗೇರುಸೊಪ್ಪ, ಗೋಕರ್ಣ, ಅಂಕೋಲಾ, ಗದಗ ದಲ್ಲಿ ತಾಲಾ ೫ ಸೆಂಟಿಮೀಟರ್ ಮಳೆಯಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮುಂದಿನ ೨೪ ಗಂಟೆಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ದಕ್ಷಿಣ ಒಳನಾಡು ಹಾಗೂ ಉತ್ತರ ಒಳನಾಡಿನ ಹಲವೆಡೆ ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿದೆ.

ಬೆಂಗಳೂರಿನಲ್ಲೂ ಗುಡುಗು ಸಹಿತ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>